**ಓ.ಎಸ್. ನಂಃ 570/2024**

**ಡಿ.ಡಬ್ಲ್ಯೂಃ 1**

**ದಿನಾಂಕ 06.08.2026 ರಂದು ಸಾಕ್ಷಿದಾರರನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ವಾದಿಯ ಪರ ಃ ಶ್ರೀ.ಬಿ.ಕೆ.ಎಸ್ ವಕೀಲರಿಂದಃ**

1. ವಾದಿಯು ದಾವಾ ಆಸ್ತಿಯನ್ನು ಖರೀದಿಸುವ ಪೂರ್ವದಲ್ಲಿ ದಾವಾ ಆಸ್ತಿಯು ಸಯ್ಯದ್ ರೆಹಮತುಲ್ಲಾ ಬಿನ್ ಸಯ್ಯದ್ ಖಾದರ್ ಮೊಹಿದ್ದೀನ್ ಸಾಬ್ ರವರ ಹೆಸರಿನಲ್ಲಿತ್ತು ಎಂದು ಸೂಚಿಸಿದ ಪ್ರಶ್ನೆಗೆ ಸಾಕ್ಷಿಯು ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ನಿಪಿ-1 ರ ಕ್ರಯ ಪತ್ರದಡಿಯಲ್ಲಿ ದಾವಾ ಆಸ್ತಿಯನ್ನು ವಾದಿಯು ಸದರಿ ಸಯ್ಯದ್ ರೆಹಮತುಲ್ಲಾ ಬಿನ್ ಸಯ್ಯದ್ ಖಾದರ್ ಮೊಹಿದ್ದೀನ್ ಸಾಬ್ ರವರಿಂದ ಖರೀದಿಸಿರುತ್ತಾರೆ ಎಂದರೆ ಸರಿ. ನಿಪಿ-1 ರ ಕ್ರಯ ಪತ್ರದಡಿಯಲ್ಲಿ ದಾವಾ ಆಸ್ತಿಯನ್ನು ಖರೀದಿಸಿದ ನಂತರ ದಾವಾ ಆಸ್ತಿಯ ಖಾತೆಯನ್ನು ತಮ್ಮ ಹೆಸರಿಗೆ ವರ್ಗಾವಣೆ ಮಾಡಿಸಿಕೊಂಡು ವಾದಿಯೇ ದಾವಾ ಆಸ್ತಿಯ ಸ್ವಾಧೀನದಲ್ಲಿದ್ದಾರೆ ಎಂದರೆ ಸರಿ.

2. ದಾವಾ ಆಸ್ತಿಯನ್ನು ಖರೀದಿಸಿದಾಗಿದನಿಂದಲೂ ವಾದಿಯೇ ದಾವಾ ಆಸ್ತಿಯನ್ನು ಉಳುಮೆ ಮಾಡುತ್ತಿದ್ದಾರೆ ಎಂದು ಸೂಚಿಸಿದ ಪ್ರಶ್ನೆಗೆ ಸಾಕ್ಷಿಯು ನಾನೇ ದಾವಾ ಆಸ್ತಿಯನ್ನು ಉಳುವೆ ಮಾಡುತ್ತಿದ್ದೇನೆ ಎಂದು ನುಡಿದಿರುತ್ತಾರೆ. ನಾನು ದಾವಾ ಆಸ್ತಿಯನ್ನು ಉಳುವೆ ಮಾಡುತ್ತಿದ್ದೇನೆ ಎಂದು ತೋರಿಸಲು ನನ್ನ ಬಳಿ ಯಾವುದೇ ದಾಖಲೆಗಳು ಇಲ್ಲ. ದಿನಾಂಕಃ 18.04.2021 ರಂದು ನೀವು ದಾವಾ ಆಸ್ತಿಗೆ ಹೋಗಿ ವಾದಿಯ ಸ್ವಾಧೀನಕ್ಕೆ ತೊಂದರೆ ಕೊಟ್ಟ ಕಾರಣ ವಾದಿಯು ನಿಮ್ಮ ವಿರುದ್ಧ ಪೋಲಿಸ್ ಠಾಣೆಯಲಿಲ ದೂರನ್ನು ನೀಡಿರುತ್ತಾರೆ ಎಂದು ಸೂಚಿಸಿದ ಪ್ರಶ್ನೆಗೆ ಸಾಕ್ಷಿಯು ವಾದಿಯು ನನ್ನ ವಿರುದ್ಧ ಪೋಲಿಸ್ ಠಾಣೆಯಲ್ಲಿ ದೂರನ್ನು ನೀಡಿರುವುದು ಸತ್ಯ ಆದರೆ ನಾನು ವಾದಿಗೆ ಯಾವುದೇ ತೊಂದರೆ ಕೊಟ್ಟಿರುವುದಿಲ್ಲ ಎಂದು ನುಡಿದಿರುತ್ತಾರೆ. ಇನ್ನು ಮುಂದೆ ದಾವಾ ಆಸ್ತಿಗೆ ಹೋಗಿ ವಾದಿಯ ಸ್ವಾಧೀನಕ್ಕೆ ತೊಂದರೆ ಕೊಡಬಾರದು ಎಂದು ಹೇಳಿ ಪೋಲಿಸರು ನನ್ನಿಂದ ಮುಚ್ಚಳಿಕೆ ಬರೆಸಿರುತ್ತಾರೆ ಎಂದರೆ ಸರಿ.

3. ಅದಾದ ಒಂದೂವರೆ ವರ್ಷದ ಬಳಿಕ ನಾನು ಪುನಃ ದಾವಾ ಆಸ್ತಿಗೆ ಹೋಗಿ ವಾದಿಯ ಸ್ವಾಧೀನಕ್ಕೆ ತೊಂದರೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ನಿಡಿ–1 ರ ದಾಖಲೆಯನ್ನು ನಾನು ಖಾಸಗಿ ಸರ್ವೇಯರ್ ರವರ ಮೂಲಕ ಮಾಡಿಸಿರುತ್ತೇನೆ ಎಂದರೆ ಸರಿ. ನಾನು ದಾವಾ ಆಸ್ತಿಯ ಸ್ವಾಧೀನದಲ್ಲಿ ಇರದಿದ್ದರೂ ಸಹ ನಿಡಿ–1 ರ ಸುಳ್ಳು ದಾಖಲೆಯನ್ನು ಸೃಷ್ಟಿಸಿ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ದಾವಾ ಆಸ್ತಿಯ ಮೇಲೆ ಯಾವುದೇ ಹಕ್ಕು ಇರದಿದ್ದರೂ ಸಹ ವಿನಾಃ ಕಾರಣ ದಾವಾ ಆಸ್ತಿಗೆ ಹೋಗಿ ವಾದಿಯ ಸ್ವಾಧೀನಕ್ಕೆ ತೊಂದರೆ ಕೊಡುತ್ತಿದ್ದೇನೆ ಎಂದರೆ ಸರಿಯಲ್ಲ.

4. ನಾನು ನಿಡಿ–1 ರ ಕ್ರಯಪತ್ರವನ್ನು ಯಾವುದೇ ನ್ಯಾಯಾಲಯದಲ್ಲಿ ಪ್ರಶ್ನಿಸಿರುವುದಿಲ್ಲ. ವಾದಿಗೆ ತೊಂದರೆ ಕೊಡುವ ಉದ್ದೇಶದಿಂದ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**1 ನೇ ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ**
**ನ್ಯಾಯಾಧೀಶರು, ಕೆ.ಆರ್.ನಗರ.**